All India Radio: Bangalore
Regional Bulletin In Kannada
21.02.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಅಭಯಹಸ್ತ ಕಾರ್ಯಕ್ರಮ ಉದ್ಘಾಟನೆ ; ವಿವಿಧ ಆಡಳಿತ ವೃಂದಗಳ ನೇಮಕಾತಿ ಪತ್ರ ವಿತರಣೆ
- ಉದ್ಯೋಗ ಮೇಳಗಳಲ್ಲಿ ಭಾಗವಹಿಸಿ ಅವಕಾಶ ಸದುಪಯೋಗ ಪಡಿಸಿಕೊಳ್ಳುವಂತೆ ಯುವಜನತೆಗೆ ಸಚಿವ ಎನ್.ಚಲುವರಾಯಸ್ವಾಮಿ ಕರೆ
- ದ್ವಿತೀಯ ಪಿಯುಸಿ ಪರೀಕ್ಷೆ ವ್ಯವಸ್ಥಿತವಾಗಿ ನಡೆಸಲು ವಿವಿಧ ಜಿಲ್ಲಾಧಿಕಾರಿಗಳಿಂದ ಸಿದ್ಧತಾ ಸಭೆ
- ಚಿಕ್ಕಮಗಳೂರಿನಲ್ಲಿ ಬುಡಕಟ್ಟು, ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆ ಆರಂಭ

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಇಂದು "ಅಭಯ ಹಸ್ತ" ಕಾರ್ಯಕ್ರಮವನ್ನು ಉದ್ಘಾಟಿಸಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ವೃಂದಗಳ ನೇಮಕಾತಿ ಆದೇಶಗಳನ್ನು ವಿತರಿಸಿದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ಶಾಸಕ ರಿಜ್ವಾನ್ ಅರ್ಷದ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ಸೇರಿದಂತೆ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

<><><><>

ಯುವ ಜನತೆ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಕರೆ ನೀಡಿದ್ದಾರೆ. ಮಂಡ್ಯದಲ್ಲಿಂದು "ಜಿಲ್ಲಾ ಮಟ್ಟದ ಉದ್ಯೋಗ ಮೇಳ-೨೦೨೫" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಿರುದ್ಯೋಗ ಸಮಸ್ಯೆಯನ್ನು ಹೋಗಲಾಡಿಸಲು ಜಿಲ್ಲೆಯಲ್ಲಿ ವರ್ಷಕ್ಕೆ ಎರಡು ಬಾರಿ ಬೃಹತ್ ಉದ್ಯೋಗ ಮೇಳವನ್ನು

ಆಯೋಜನೆ ಮಾಡಲಾಗುವುದು ಎಂದು ಹೇಳಿದರು. ಉದ್ಯೋಗ ಮೇಳ ಸರ್ಕಾರದ ಒಂದು ಕಾರ್ಯಕ್ರಮವಾಗಿದೆ. ಇಂದು ಉದ್ಯೋಗ ಮೇಳದಲ್ಲಿ ೧೫೦ ಕಂಪನಿಗಳು ಭಾಗವಹಿಸಿವೆ. ಆನ್‌ಲೈನ್ ಮೂಲಕ ೬ ಸಾವಿರ ಉದ್ಯೋಗ ಆಕಾಂಕ್ಷಿಗಳು ನೊಂದಣಿ ಯಾಗಿರುವುದು ಸಂತಸದ ವಿಚಾರ ಎಂದು ಹೇಳಿದರು. ಜಿಲ್ಲೆಯಲ್ಲಿ ಯುವ ಜನತೆ ಗೋಸ್ಕರ ಶೀಘ್ರದಲ್ಲೇ ಯುವ ಉತ್ಸವ ಆಯೋಜಿಸಲಾಗುವುದು ಎಂದು ಸಚಿವರು ಈ ಸಂದರ್ಭದಲ್ಲಿ ತಿಳಿಸಿದರು.

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಮಾತನಾಡಿ ಯುವ ನಿಧಿ ಯೋಜನೆಯಡಿ ರಾಜ್ಯದಲ್ಲಿ  ೩ ಲಕ್ಷದ ೮ ಸಾವಿರಕ್ಕೂ ಅಧಿಕ ನಿರುದ್ಯೋಗಿ ಪದವೀಧರರಿಗೆ ೯೧೨ ಕೋಟಿ ರೂಪಾಯಿ ಹಾಗೂ ಮಂಡ್ಯ ಜಿಲ್ಲೆಯಲ್ಲಿ ೬ ಸಾವಿರದ ೨೨೨ ನಿರುದ್ಯೋಗಿ ಪದವೀಧರರಿಗೆ ಯೋಜನೆಯ ಮೂಲಕ ೨೧ ವರೆ ಕೋಟಿ ರೂಪಾಯಿಗೂ ಅಧಿಕ ಹಣವನ್ನು ಅವರ ಖಾತೆಗೆ ನೀಡುವ ಕೆಲಸ ಆಗಿದೆ. ಯುವಜನತೆ ತಮ್ಮ ಕೌಶಲ್ಯತೆಯನ್ನು ಹೆಚ್ಚಿಸಿಕೊಂಡು ಉದ್ಯೋಗವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು. ಶಾಸಕ ಪಿ.ರವಿಕುಮಾರ್ ಗಣಿಗ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷ ಎ.ಬಿ.ರಮೇಶ್ ಬಂಡಿ ಸಿದ್ದೇಗೌಡ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ವಿವಿಧ ಹುದ್ದೆಗೆ ನೇಮಕಾತಿ ಪಡೆದ ವಿಶೇಷ ಚೇತನರಿಗೆ ಗಣ್ಯರು ನೇಮಕಾತಿ ಪತ್ರ ನೀಡಿದರು.

ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯ, ದೀನ್ ದಯಾಳ್ ಅಂತ್ಯೋದಯ ಯೋಜನೆ-ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ, ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ,  ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಮಂಡ್ಯ ವಿಶ್ವವಿದ್ಯಾಲಯ ಸಹಭಾಗಿತ್ವದಲ್ಲಿ ಈ ಕಾರ್ಯಕ್ರಮ ಏರ್ಪಡಿಸಲಾಗಿದೆ.

<><><><>

ಆಹಾರ ಪಡೆಯುವುದು ಪ್ರತಿಯೊಬ್ಬ ನಾಗರಿಕನ ಹಕ್ಕಾಗಿದ್ದು, ಜನರ ಸ್ಥಳೀಯ ಸಂಸ್ಕೃತಿಗೆ ಪೂರಕವಾದ, ಗುಣಮಟ್ಟದ ಹಾಗೂ ಪೌಷ್ಟಿಕ ಆಹಾರ ತಲುಪಿಸಿದಾಗ ಮಾತ್ರ ರಾಷ್ಟ್ರೀಯ ಕಾಯ್ದೆಯ ಆಶಯ ಈಡೇರಲು ಸಾಧ್ಯ ಎಂದು ಆಹಾರ ಭದ್ರತಾ ಆಯೋಗದ ಅಧ್ಯಕ್ಷ

ಡಾ.ಹೆಚ್.ಕೃಷ್ಣ ದಾವಣಗೆರೆಯಲ್ಲಿಂದು ತಿಳಿಸಿದ್ದಾರೆ. ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಹಾರ ಭದ್ರತಾ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ವಿವಿಧ ಇಲಾಖೆಗಳ ನಡುವೆ ಸಮನ್ವಯ ಅತ್ಯಗತ್ಯ. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯು ಕುಂದುಕೊರತೆ ನಿವಾರಣಾ ಕೇಂದ್ರವಾಗಿ ಪ್ರಮುಖ ಪಾತ್ರ ವಹಿಸಬೇಕು ಎಂದರು. ಕಾಯ್ದೆಯ ಮೇಲ್ವಿಚಾರಣೆ ಮಾಡುವುದು ಆಯೋಗದ ಜವಾಬ್ದಾರಿಯಾಗಿದ್ದು, ಅಧಿಕಾರಿಗಳು ಪರಸ್ಪರ ಸಹಕಾರದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಅವರು ಸೂಚಿಸಿದರು.

<><><>

ಪಶು ಸಂಗೋಪನೆ ಮತ್ತು ಹೈನುಗಾರಿಕೆ ಅಳವಡಿಸಿಕೊಂಡಾಗ ಕೃಷಿ ಲಾಭದಾಯಕ ವಾಗುತ್ತದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು. ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿ ಇಂದು ಪಶು ಸಂಗೋಪನೆ ಹಾಗೂ ಪ್ರಾಣಿ ಕಲ್ಯಾಣ ಮಾಸಾಚರಣೆ ಅಂಗವಾಗಿ ಏರ್ಪಡಿಸಲಾಗಿದ್ದ ಬೆಳಗಾವಿ ವಿಭಾಗ ಮಟ್ಟದ ತಾಂತ್ರಿಕ ಸಮ್ಮೇಳನವನ್ನು ಉದ್ಘಾಟಿಸಿ ಸಚಿವರು ಮಾತನಾಡಿದರು. ಪಶುಸಂಗೋಪನಾ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗಾಗಿ ಹೆಚ್ಚಿನ ಚಿಂತನ ಮತ್ತು ಮಂಥನಗಳು ಈ ತಾಂತ್ರಿಕ ಸಮ್ಮೇಳನದಲ್ಲಿ ಸಂಪೂರ್ಣವಾಗಿ ನಡೆದು ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸುವ ಕಾರ್ಯವಾಗಬೇಕಿದೆ ಎಂದು ಸಚಿವ ಪಾಟೀಲ್ ತಿಳಿಸಿದರು. ಪಶುಸಂಗೋಪನೆ ಮತ್ತು ಹೈನುಗಾರಿಕೆಯ ಕುರಿತು ರೈತರಲ್ಲಿ ಒಲವು ಮೂಡಿಸುವ ಕಾರ್ಯದಲ್ಲಿ ತೊಡಗಿಸುವಂತೆ ಮಾಡಲು ಪಶುಪಾಲನಾ ಇಲಾಖೆಯ ಅಧಿಕಾರಿಗಳು ಶ್ರಮಿಸಬೇಕೆಂದು ಸಚಿವ ಪಾಟೀಲ ತಿಳಿಸಿದರು. ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಸೇರಿದಂತೆ ಹಲವು ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

<><><>

ಈ ತಿಂಗಳ ೨೮ ರಿಂದ ಮುಂದಿನ ತಿಂಗಳ ೧೭ರವರೆಗೆ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸಲು ಜಿಲ್ಲಾ ಮಟ್ಟದಲ್ಲಿ ಸಿದ್ಧತಾ ಸಭೆಗಳು ನಡೆದಿವೆ. ಯಾದಗಿರಿ ನಗರದಲ್ಲಿ ಇಂದು ನಡೆದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಮಾತನಾಡಿ, ೨೦೨೯ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ನಕಲುಮುಕ್ತ ಹಾಗೂ ವ್ಯವಸ್ಥಿತವಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿ ಒಟ್ಟು ೨೦ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಶಹಾಪುರದಲ್ಲಿ

೫, ಸುರಪುರದಲ್ಲಿ ೪, ಯಾದಗಿರಿಯಲ್ಲಿ ೬, ಗುರುಮಠಕಲ್ ನಲ್ಲಿ ೨, ಕೆಂಭಾವಿಯಲ್ಲಿ ೧ ಹಾಗೂ ಹುಣಸಗಿಯಲ್ಲಿ ೧ ಕೇಂದ್ರಗಳಿವೆ ಎಂದರು. ಜಿಲ್ಲೆಯಲ್ಲಿ ಒಟ್ಟು ೧೧ ಸಾವಿರದ ೬೯೦ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ೧೦೫ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳನ್ನು ಈ ಕೇಂದ್ರಗಳಿಗೆ ಹಂಚಿಕೆ ಮಾಡಲಾಗಿದೆ. ಪ್ರವೇಶ ಪತ್ರಗಳನ್ನು ಆನ್‌ಲೈನ್ ಮೂಲಕ ವಿತರಿಸಲಾಗಿದೆ ಎಂದು ತಿಳಿಸಿದರು. ಪ್ರತಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಸಂಪೂರ್ಣ ಜವಾಬ್ದಾರಿಯಿಂದ ನಿಯಮಾನುಸಾರ ಪರೀಕ್ಷೆ ನಡೆಸಬೇಕು. ಸೂಕ್ಷ್ಮ ಕೇಂದ್ರಗಳಲ್ಲಿ ಕಟ್ಟೆಚ್ಚರ ವಹಿಸಬೇಕು. ನಕಲು ಅಥವಾ ಸಾಮೂಹಿಕ ನಕಲು ಕಂಡುಬಂದಲ್ಲಿ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಸಿದರು. ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯಾ ಕಾರವಾರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪರೀಕ್ಷೆಯನ್ನು ಪಾರದರ್ಶಕವಾಗಿ ಹಾಗೂ ಅತ್ಯಂತ ವ್ಯವಸ್ಥಿತವಾಗಿ ನಡೆಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿಸಲಾದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯ ೩೫ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ೫ ಸಾವಿರದ ೯೩೯ ಬಾಲಕರು ಮತ್ತು ೮ ಸಾವಿರದ ೫೪೫ ಬಾಲಕಿಯರು ಸೇರಿದಂತೆ ಒಟ್ಟು ೧೪ ಸಾವಿರದ ೪೮೪ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದಾರೆ. ಯಾವುದೇ ರೀತಿಯ ಪರೀಕ್ಷಾ ಅವ್ಯವಹಾರಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದರು. ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿ ವಿದ್ಯುತ್ ಕಡಿತಗೊಳಿಸದಂತೆ ಹೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು. ಮತ್ತು ವಿದ್ಯಾರ್ಥಿಗಳಿಗೆ ಬಸ್ ಸಂಚಾರಕ್ಕೆ ಅನುಕೂಲವಾಗುವಂತೆ ಅಗತ್ಯ ಸಂಖ್ಯೆಯ ಬಸ್‌ಗಳ ವ್ಯವಸ್ಥೆಯನ್ನು ಮಾಡುವಂತೆ ಕೆ. ಎಸ್. ಆರ್. ಟಿ. ಸಿ. ಅಧಿಕಾರಿಗಳಿಗೆ ಸೂಚಿಸಿದರು. ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಪೊಲೀಸ್ ಭದ್ರತೆಯಲ್ಲಿ, ಜಿ.ಪಿ.ಎಸ್. ಅಳವಡಿಸಿದ ವಾಹನಗಳ ಮೂಲಕ ಪರೀಕ್ಷೆ ಕೇಂದ್ರಗಳಿಗೆ ತಲುಪಿಸಲು ಹಾಗೂ ಎಲ್ಲಾ ಕೇಂದ್ರಗಳಿಗೆ ಪೊಲೀಸ್ ಭದ್ರತೆ ಒದಗಿಸಲು ಅಗತ್ಯ ವ್ಯವಸ್ಥೆ ಮಾಡಿಕೊಳ್ಳುವಂತೆ ಸೂಚಿಸಿದರು. ಚಾಮರಾಜನಗರ ಜಿಲ್ಲಾಡಳಿತವು ೨೦೨೬ರ ದ್ವಿತೀಯ ಪಿಯುಸಿ ಪರೀಕ್ಷೆ ಬರೆಯಲಿರುವ ವಿದ್ಯಾರ್ಥಿಗಳಿಗಾಗಿ ಸಹಾಯವಾಣಿ ತೆರೆದಿದ್ದು, ಮಾಹಿತಿ ನೀಡುವ ಉದ್ದೇಶದಿಂದ ಪ್ರಾಂಶುಪಾಲರು ಹಾಗೂ ಉಪನ್ಯಾಸಕರನ್ನು ನಿಯೋಜಿಸಿದೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ

ವಾಣಿಜ್ಯ, ವಿಜ್ಞಾನ ಮತ್ತು ಕಲಾ ವಿಭಾಗಗಳ ವಿದ್ಯಾರ್ಥಿಗಳಿಗೆ ಸಹಾಯವಾಣಿ ತೆರೆದು ನುರಿತ ಪ್ರಾಂಶುಪಾಲರು ಮತ್ತು ಉಪನ್ಯಾಸಕರನ್ನು ನಿಯೋಜಿಸಲಾಗಿದೆ.

<><><>

ಚಿಕ್ಕಮಗಳೂರಿನಲ್ಲಿ ಅರಣ್ಯಾಧಾರಿತ ಬುಡಕಟ್ಟು ಜನಾಂಗದವರಿಗಾಗಿ ಏರ್ಪಡಿಸಲಾಗಿರುವ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆ ಇಂದು ಆರಂಭವಾಯಿತು. ರಾಜ್ಯ ಪರಿಸರ ಮೌಲ್ಯ ಮಾಪನ ಪ್ರಾಧಿಕಾರದ ಅಧ್ಯಕ್ಷ ಎ.ಎನ್ ಮಹೇಶ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮವನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ.

<><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮವನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>